**2007ರ ಕರ್ನಾಟಕ ಅಧಿನಿಯಮ ಸಂಖ್ಯೆ. 20**

**(2007ರ ಆಗಸ್ಟ್ ಹತ್ತನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)**

# ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2007

## ಪ್ರಕರಣಗಳ ಪಟ್ಟಿ

**ಪ್ರಕರಣಗಳು:**


1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. 3ನೇ ಪ್ರಕರಣದ ತಿದ್ದುಪಡಿ


## ಉದ್ದೇಶಗಳ ಮತ್ತು ಕಾರಣಗಳ ಹೇಳಿಕೆ

**2007ರ ತಿದ್ದುಪಡಿ ಅಧಿನಿಯಮ ಸಂಖ್ಯೆ 20.-** ರಾಮನಗರವು ¨ಬೆಂಗಳೂರು ನಗರದಿಂದ ಸುಮಾರು 50 ಕಿ.ಮೀ. ದೂರದಲ್ಲಿ ಬೆಂಗಳೂರು-ಮೈಸೂರು ರಾಜ್ಯ ಹೆದ್ದಾರಿಯಲ್ಲಿದೆ. ಬೆಂಗಳೂರು ನಗರದ ಮೇಲಿರುವ ಒತ್ತಡವನ್ನು ಬಹಳಷ್ಟು ಕಡಿಮೆ ಮಾಡುವುದಕ್ಕಾಗಿ ಮತ್ತು ಬೆಂಗಳೂರು ನಗರಕ್ಕೆ ಪರ್ಯಾಯ ನಗರವಾಗಿ ರಾಮನಗರವನ್ನು ಅಭಿವೃದ್ಧಿಪಡಿಸುವುದಕ್ಕಾಗಿ ರಾಜ್ಯ ಸರ್ಕಾರವು ರಾಮನಗರವನ್ನು ಜಿಲ್ಲೆಯಾಗಿ ಪರಿವರ್ತಿಸಲು ಆಲೋಚಿಸುತ್ತಿದೆ. ಈ ದಿಶೆಯಲ್ಲಿ ಕಂದಾಯ, ಪೊಲೀಸು ಮತ್ತು ಜಿಲ್ಲಾ ಪಂಚಾಯತ್‌ಗಳ ಜಿಲ್ಲಾ ಮಟ್ಟದ ಕಚೇರಿಗಳನ್ನು ನಿರ್ಮಿಸುವ ಕೆಲಸ ಪ್ರಾರಂಭವಾಗಿದೆ. ವೈದ್ಯಕೀಯ, ದಂತ ವೈದ್ಯಕೀಯ, ಫಾರ್ಮಸಿ, ನರ್ಸಿಂಗ್ ಕಾಲೇಜುಗಳು ಮತ್ತು 250 ಹಾಸಿಗೆಗಳಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಮತ್ತು 750 ಹಾಸಿಗೆಗಳುಳ್ಳ ಹೈಟೆಕ್ ಆಸ್ಪತ್ರೆ ಹಾಗೂ ಇಂಥಹವೇ ಇತರ ಕಟ್ಟಡಗಳನ್ನುಳ್ಳ ಆರೋಗ್ಯ ಸಂಕೀರ್ಣ ಸಹಿತವಾಗಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಕ್ಯಾಂಪಸನ್ನು ನಿರ್ಮಾಣ ಮಾಡಲು ಸಹ ಉದ್ದೇಶಿಸಲಾಗಿದೆ.

ಆದ್ದರಿಂದ ಈ ವಿಧೇಯಕ.
(2007ರ ವಿಧಾನಸಭಾ ವಿಧೇಯಕ ಸಂಖ್ಯೆ 35ರಲ್ಲಿದ್ದಂತೆ)

(ಭಾರತ ಸಂವಿಧಾನದ 7ನೇ ಅನುಸೂಚಿಯ 3ನೇ ಪಟ್ಟಿಯ 25ನೇ ನಮೂದು)

- - - -

**2007ರ ಕರ್ನಾಟಕ ಅಧಿನಿಯಮ ಸಂಖ್ಯೆ. 20**
**(2007ರ ಆಗಸ್ಟ್ ಹತ್ತನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)**

**ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2007**
**(2007ರ ಆಗಸ್ಟ್ ಎಂಟನೇ ದಿನಾಂಕದಂದು ರಾಜ್ಯಪಾಲರ ಅನುಮೋದನೆಯನ್ನು ಪಡೆಯಲಾಗಿದೆ)**

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಅಧಿನಿಯಮ, 1994ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಅಧಿನಿಯಮ 1994ನ್ನು (1994ರ ಕರ್ನಾಟಕ ಅಧಿನಿಯಮ, 44) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತೆಂಟನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ***ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ಅಧಿನಿಯಮ 2007*** ಎಂದು ಕರೆಯತಕ್ಕದ್ದು.

(2) ಇದು ಕೂಡಲೇ ಜಾರಿಗೆ ಬರತಕ್ಕದ್ದು.

**2. 3ನೇ ಪ್ರಕರಣದ ತಿದ್ದುಪಡಿ.-** ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಅಧಿನಿಯಮ, 1994ರ (1994ರ ಕರ್ನಾಟಕ ಅಧಿನಿಯಮ 44) 3ನೇ ಪ್ರಕರಣದ (4)ನೇ ಉಪಪ್ರಕರಣದಲ್ಲಿ "ಬೆಂಗಳೂರಿನಲ್ಲಿರತಕ್ಕದ್ದು" ಎಂಬ ಪದಕ್ಕೆ "ರಾಮನಗರದಲ್ಲಿರತಕ್ಕದ್ದು" ಎಂಬ ಪದವನ್ನು ಪ್ರತಿಯೋಜಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ. ಬೋರೇ ಗೌಡ**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.

ನಿರ್ದೇಶಕರು, ಮುದ್ರಣ, ಲೇಖನ ಸಾಮಗ್ರಿ ಮತ್ತು ಪ್ರಕಟಣೆಗಳ ಇಲಾಖೆ, ಬೆಂಗಳೂರು.